766 (23)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ, ಶ್ರೀ ಎಸ್.ವ್ಹಿ. ಸಂಕನೂರ ಹಾಗೂ ಇತರರು ನಿಯಮ 72ರ ಮೇರೆಗೆ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಹೇಳಿಕೆ:-**

ಕಳೆದ ಒಂದು ವರ್ಷದಲ್ಲಿ ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಗಳು ಒಂದಲ್ಲ ಒಂದು ಗೊಂದಲಕ್ಕೆ/ಅವಾಂತರಗಳಿಗೆ ಈಡಾಗುತ್ತಿರುವುದು ನೋವಿನ ಸಂಗತಿ ಒಂದೆಡೆಯಾದರೆ ಸದರಿ ಆಯೋಗವು ನಡೆಸುವ ಪರೀಕ್ಷೆಯಲ್ಲಿನ ನ್ಯೂನ್ಯತೆಗಳಿಗೆ ಹೊಣೆ ಯಾರು? ಹೊಣೆಯಾದವರ ವಿರುದ್ಧ ಯಾವ ಕ್ರಮಗಳನ್ನು ಸಹ ಜರುಗಿಸದೇ ಇರುವುದು ದುರದೃಷ್ಟಕರ ಸಂಗತಿ ಇನ್ನೊಂದೆಡೆಯಾಗಿದೆ.

ರಾಜ್ಯದಲ್ಲಿನ ಕರ್ನಾಟಕ ಲೋಕಸೇವಾ ಆಯೋಗದ ಸರಣಿ ಯಡವಟ್ಟಿನಿಂದಾಗಿ ಉದ್ಯೋಗಾಕಾಂಕ್ಷಿಗಳು ಕಂಗಾಲಾಗಿರುವ ಕುರಿತು ಸರ್ಕಾರದ ಗಮನ ಸೆಳೆಯಬಯಸುತ್ತೇನೆ.

**ಸರ್ಕಾರದ ಉತ್ತರ:-**

ಆಯೋಗವು ಒಂದು ಸಾಂವಿಧಾನಿಕ ಸಂಸ್ಥೆಯಾಗಿದ್ದು, ನೇಮಕಾತಿ ಪ್ರಾಧಿಕಾರಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಯನ್ನು ಪರಿಶೀಲಿಸಿ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳುತ್ತದೆ. ಕಳೆದ ಒಂದು ವರ್ಷದಲ್ಲಿ ವಿವಿಧ ವೃಂದಗಳ ತಾಂತ್ರಿಕ/ತಾಂತ್ರಿಕೇತರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ 28 ಪತ್ರಿಕೆಗಳನ್ನೊಳಗೊಂಡ 11 ಪರೀಕ್ಷೆಗಳನ್ನು ಯಾವುದೇ ಲೋಪದೋಷಗಳಿಲ್ಲದೆ ಸುಲಲಿತವಾಗಿ ಆಯೋಗವು ನಡೆಸಿರುತ್ತದೆ.

ಉಳಿದಂತೆ, ದಿನಾಂಕ:27-08-2024ರಂದು ನಡೆದ ಗೆಜ್ಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಪರೀಕ್ಷೆ ಮತ್ತು ದಿನಾಂಕ:17-11-2024ರಂದು ನಡೆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಹೈ.ಕ.) ಪರೀಕ್ಷೆಗಳಲ್ಲಿ ಕೆಲವು ಗೊಂದಲಗಳಾಗಿದ್ದು, ಪ್ರಕರಣಗಳ ವಿವರಣೆ ಕೆಳಕಂಡಂತಿದೆ.

**1) ದಿನಾಂಕ:27-08-2024ರಂದು ನಡೆದ ಗೆಜ್ಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಪರೀಕ್ಷೆಗೆ ಸಂಬಂಧಿಸಿದ ವಿವರ:**

ಕರ್ನಾಟಕ ಲೋಕಸೇವಾ ಆಯೋಗದಿಂದ 2023-24ನೇ ಸಾಲಿನ 384 – ಗೆಜ್ಜೆಟೆಡ್ ಪ್ರೊಬೆಷನರ್ಸ್ ಹುದ್ದೆಗಳ ನೇಮಕಾತಿಗಾಗಿ ದಿನಾಂಕ:27-08-2024 ರಂದು ಪೂರ್ವಭಾವಿ ಪರೀಕ್ಷೆಯನ್ನು ನಡೆಸಲಾಗಿದ್ದು, ಕರ್ನಾಟಕ ಲೋಕಸೇವಾ ಆಯೋಗವು 2024ರ ಆಗಸ್ಟ್ 27ರಂದು ನಡೆಸಿದ ಕೆ.ಎ.ಎಸ್ ಪೂರ್ವಭಾವಿ ಪರೀಕ್ಷೆಗೆ ಒಟ್ಟು 2,10,916 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿರುತ್ತಾರೆ.

ದಿನಾಂಕ:27.08.2024ರಂದು ನಡೆದ ಪೂರ್ವಭಾವಿ ಪರೀಕ್ಷೆಯಲ್ಲಿನ ಕನ್ನಡ ಪ್ರಶ್ನೆ ಪತ್ರಿಕೆಯಲ್ಲಿ ಕೆಲವು ಪ್ರಶ್ನೆಗಳಲ್ಲಿ ಭಾಷಾಂತರ ಲೋಪ ಕಂಡುಬಂದ ಹಿನ್ನಲೆಯಲ್ಲಿ ದಿನಾಂಕ: 29.12.2024ರಂದು ಮರುಪರೀಕ್ಷೆಯನ್ನು ನಡೆಸಲು ನಿರ್ಧರಿಸಲಾಗಿರುತ್ತದೆ .

ಆಯೋಗವು ನಿಗದಿಪಡಿಸಿರುವ ದಿನಾಂಕ: 29.12.2024ರ ಮರು ಪರೀಕ್ಷೆಯನ್ನು ಪ್ರಶ್ನಿಸಿ, ಶ್ರೀಮತಿ ಸ್ಫೂರ್ತಿ ಭೈರಪ್ಪನವರ್ ಇವರು ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಪೀಠದಲ್ಲಿ ರಿಟ್ ಅರ್ಜಿ ಸಂಖ್ಯೆ: 106087/2024 ಅನ್ನು ದಾಖಲಿಸಿದ್ದು, ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ತಡೆಯಾಜ್ಞೆ ನೀಡಿದ್ದು, ತಡೆಯಾಜ್ಞೆಯನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.

**2) <u>ದಿನಾಂಕ:17-11-2024 ರಂದು ನಡೆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಹೈ.ಕ.) ಹುದ್ದೆಯ ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದ ವಿವರ;</u>**

ಸಿಂಧನೂರು ಮತ್ತು ಕಲಬುರಗಿ ಕೇಂದ್ರಗಳಲ್ಲಿ ಅನುಕ್ರಮವಾಗಿ ಒಟ್ಟು 16 ಮತ್ತು 67 ಪರೀಕ್ಷಾ ಉಪಕೇಂದ್ರಗಳಲ್ಲಿ ಪರೀಕ್ಷೆಯನ್ನು ನಡೆಸಿದ್ದು, ಅವುಗಳ ಪೈಕಿ ಸಿಂಧನೂರಿನ 15 ಮತ್ತು ಕಲಬುರಗಿ 66 ಪರೀಕ್ಷಾ ಉಪಕೇಂದ್ರಗಳಲ್ಲಿ ಸುಲಲಿತವಾಗಿ ಪರೀಕ್ಷೆಯನ್ನು ನಡೆಸಲಾಗಿರುತ್ತದೆ.

ಇನ್ನುಳಿದಂತೆ ಸಿಂಧನೂರು ಮತ್ತು ಕಲಬುರಗಿ ಕೇಂದ್ರಗಳಲ್ಲಿ ತಲಾ ಒಂದೊಂದು ಪರೀಕ್ಷಾ ಉಪಕೇಂದ್ರದಲ್ಲಿ ಪ್ರಶ್ನೆಪತ್ರಿಕೆಗಳನ್ನು ವಿತರಿಸುವ ಸಂದರ್ಭದಲ್ಲಿ ಗೊಂದಲ ಉಂಟಾಗಿದ್ದು, ಕೆಲವು ಅಭ್ಯರ್ಥಿಗಳು ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆಯೆಂದು ಇತರೆ ಅಭ್ಯರ್ಥಿಗಳನ್ನು ಒಟ್ಟುಗೂಡಿಸಿ ಪ್ರತಿಭಟನೆ ನಡೆಸಿದ್ದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಸಂಬಂಧಿತ ಅಧಿಕಾರಿಗಳು ಪರೀಕ್ಷಾ ಕೇಂದ್ರದಲ್ಲಿ ಅಳವಡಿಸಲಾಗಿರುವ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ ಪ್ರಶ್ನೆಪತ್ರಿಕೆ ಸೋರಿಕೆಯಾಗಿರುವ ಬಗ್ಗೆ ಯಾವುದೇ ಪುರಾವೆಗಳಿಲ್ಲವೆಂದು ವರದಿಯನ್ನು ನೀಡಿರುತ್ತಾರೆ ಮತ್ತು ಈ ಸಂದರ್ಭದಲ್ಲಿ ಗದ್ದಲವನ್ನುಂಟು ಮಾಡಿ, ಇತರೆ ಅಭ್ಯರ್ಥಿಗಳನ್ನು ಪರೀಕ್ಷಾ ಬರೆಯದಂತೆ ಪ್ರಚೋದಿಸಿದ ಹಿನ್ನಲೆಯಲ್ಲಿ 12 ಅಭ್ಯರ್ಥಿಗಳ ಮೇಲೆ ಸಂಬಂಧಪಟ್ಟ ಅಧಿಕಾರಿಗಳು ಎಫ್ಐಆರ್ ದಾಖಲಿಸಿರುತ್ತಾರೆ.

ಈ ಘಟನೆ ಕುರಿತು ಸಮಗ್ರ ತನಿಖೆ ನಡೆಸಲು ಕರ್ನಾಟಕ ಲೋಕಸೇವಾ ಆಯೋಗವು 03 ಸದಸ್ಯರ ಉಪ ಸಮಿತಿಯನ್ನು ರಚಿಸಿದ್ದು, ಉಪ ಸಮಿತಿಯು ನೀಡುವ ವರದಿಯಂತೆ ಆಯೋಗವು ಕ್ರಮಕೈಗೊಳ್ಳಲು ನಿರ್ಣಯಿಸಿರುತ್ತದೆ.

**ಸಂಖ್ಯೆ:ಸಿಆಸುಇ 233 ಎಸ್ಎಲ್ಎ 2024.**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ